# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 360 (2536)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಕುರಿತು

(ಅ) 2020-21ನೇ ಸಾಲಿನಲ್ಲಿ ರಾಜ್ಯ ಹೆದ್ದಾರಿ/ಜಿಲ್ಲಾ ಮುಖ್ಯ ರಸ್ತೆಗಳ ಅಭಿವೃದ್ಧಿಗಾಗಿ ಬಂದಿರುವ ಅನುದಾನ ಎಷ್ಟು; ಕಾಮಗಾರಿಯ ನಿರ್ವಹಣೆ ಮಾಡುವ ಕುರಿತು ಸರ್ಕಾರದ ಮಾನದಂಡಗಳೇನು; (ಟೆಂಡರ್ ಕರೆದು ಕಾರ್ಯಾದೇಶ ನೀಡಿರುವ ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) 2020-21ನೇ ಸಾಲಿನಲ್ಲಿ 3054 ಲೆಕ್ಕ ಶೀರ್ಷಿಕೆಯಡಿಯಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) 3054ರ ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುಮೋದನೆ ಆಗಿರುವ ಕಾಮಗಾರಿಗಳಿಗೆ ಮೀಸಲಿಟ್ಟ ಅನುದಾನ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಈ) 2020-21ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 3054ರಡಿಯಲ್ಲಿ ನಡೆದಿರುವ ಕಾಮಗಾರಿಗಳಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು)